ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE 8/2/2021

### ಸಂಖ್ಯಾ ಬಲ ಇಲ್ಲದಿದ್ದರೂ ಸ್ಪರ್ಧೆಗಿಳಿದ ಕಾಂಗ್ರೆಸ್ । ಹೊರಟ್ಟಿಗೆ ನಜೀರ್ ಅಹ್ಮದ್ ಎದುರಾಳಿ

# ವಿಧಾನ ಪರಿಷತ್ ಹಣಾಹಣಿಗೆ ಅಖಾಡ ಸಿದ್ಧ

**ಬೆಂಗಳೂರು:** ವಿಧಾನ ಪರಿಷತ್ ಸಭಾಪತಿ ಹುದ್ದೆಗಾಗಿ ಕಳೆದ 2 ತಿಂಗಳಿಂದ ನಡೆಯುತ್ತಿರುವ ರಾಜಕೀಯ ಚದುರಂಗದಾಟ ಕೊನೆ ಘಟ್ಟಕ್ಕೆ ತಲುಪಿದ್ದು, ಸಭಾಪತಿ ಸ್ಥಾನದ ಚುನಾವಣೆ ಪ್ರಕ್ರಿಯೆ ಸೋಮವಾರ ಪ್ರಾರಂಭವಾಗಲಿದೆ. ಆಡಳಿತಾರೂಢ ಬಿಜೆಪಿ ಹಾಗೂ ಜೆಡಿಎಸ್ ಮತ್ತೆ ದೋಸ್ತಿಯಾಗಿದ್ದು, ಹೊಂದಾಣಿಕೆ ಪ್ರಕಾರ ಉಪ ಸಭಾಪತಿ ಸ್ಥಾನವನ್ನು ಬಿಜೆಪಿ ಪಡೆದುಕೊಂಡಿದೆ. ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟು ಕೊಟ್ಟಿದೆ. ಹಾಗೆಯೇ ದೀರ್ಘಾವಧಿಯಿಂದ ಈ ಹುದ್ದೆಯ ಆಕಾಂಕ್ಷಿಯಾಗಿದ್ದ ಬಸವರಾಜ ಹೊರಟ್ಟಿ ಬಯಕೆಯೂ ಈಡೇರಲಿದೆ. ಕಾಂಗ್ರೆಸ್ ಅಭ್ಯರ್ಥಿಯಾಗಿ ನಜೀರ್ ಅಹ್ಮದ್ ಅಖಾಡಕ್ಕೆ ಇಳಿಯಲಿದ್ದಾರೆ. ಹೀಗಾಗಿ ಅವಿರೋಧ ಆಯ್ಕೆ ಸಾಧ್ಯತೆ ದೂರವಾಗಿದೆ. ಸಂಖ್ಯಾಬಲ ಇಲ್ಲದಿದ್ದರೂ ಜೆಡಿಎಸ್ ಜಾತ್ಯತೀತ ನಿಲುವನ್ನು ಕಾಂಗ್ರೆಸ್ ಪ್ರಶ್ನಿಸಿ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗಿದೆ.

**ಸಂಖ್ಯಾಬಲ**

| | |
|---|---|
| ಒಟ್ಟು ಸ್ಥಾನ | 75 |
| ಬಿಜೆಪಿ | 31 |
| ಕಾಂಗ್ರೆಸ್ | 29 |
| ಜೆಡಿಎಸ್ | 13 |
| ಪಕ್ಷೇತರ | 1 |
| ಖಾಲಿ ಸ್ಥಾನ | 1 |



ಪ್ರಜಾಪ್ರಭುತ್ವದಲ್ಲಿ ಸ್ಪರ್ಧಿಸಲು ಎಲ್ಲರಿಗೂ ಅವಕಾಶವಿದೆ. ಆದರೂ ಬಸವರಾಜ ಹೊರಟ್ಟಿ ಅವರಿಗೆ ಅಗತ್ಯ ಸಂಖ್ಯಾ ಬಲವಿದ್ದು, ಕಾಂಗ್ರೆಸ್ ಸ್ಪರ್ಧೆಯಿಂದ ಹಿಂದೆ ಸರಿದು ಅವಿರೋಧ ಆಯ್ಕೆಗೆ ಅವಕಾಶ ಮಾಡಿಕೊಡಬೇಕು.

। ಡಾ.ಸಿ.ಎನ್.ಅಶ್ವತ್ಥ ನಾರಾಯಣ ಡಿಸಿಎಂ



ವಿಧಾನ ಪರಿಷತ್ ಸಭಾಪತಿ ಸ್ಥಾನದ ಚುನಾವಣೆ ಸಂಬಂಧ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳಲಾಗಿದೆಯೇ ಹೊರತು, ಆ ಪಕ್ಷದ ಎಲ್ಲ ನಿಲುವನ್ನು ಬೆಂಬಲಿಸುತ್ತೇವೆ ಎಂದಲ್ಲ. ರಾಜ್ಯದ ಅಭಿವೃದ್ಧಿಗೆ ಹಾಗೂ ವಿಷಯಾಧಾರಿತ ಬೆಂಬಲ ನೀಡುತ್ತೇವೆ. ಜನವಿರೋಧಿ ನೀತಿ ಅನುಸರಿಸಿದಾಗ ಅದನ್ನು ಖಂಡಿಸುವ ಕೆಲಸವನ್ನೂ ಜೆಡಿಎಸ್ ಮಾಡಲಿದೆ.

। ಎಚ್.ಡಿ.ಕುಮಾರಸ್ವಾಮಿ ಮಾಜಿ ಮುಖ್ಯಮಂತ್ರಿ

## ಮೊದಲ ದಿನವೇ ಅಗ್ನಿಪರೀಕ್ಷೆ

ವಿಧಾನ ಪರಿಷತ್‌ನ ವಿಸ್ತರಿಸಿದ ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಮಸೂದೆ ಸೋಮವಾರ ಮಂಡನೆಯಾಗಲಿದ್ದು, ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡ ಮೊದಲ ದಿನವೇ ಜೆಡಿಎಸ್‌ಗೆ ಅಗ್ನಿಪರೀಕ್ಷೆ ಎದುರಾಗಿದೆ. ಸಭಾಪತಿ ಚುನಾವಣಾ ವೇಳಾಪಟ್ಟಿ ಪ್ರಕಾರ ಸೋಮವಾರ ನಾಮಪತ್ರ ಸಲ್ಲಿಕೆ, ಮಂಗಳವಾರ ಚುನಾವಣೆ ನಿಗದಿಯಾಗಿದೆ. ಹೀಗಾಗಿ ಪಕ್ಷದ ನಿಲುವು, ಮತ್ತೆ ಕುದುರಿದ ಮೈತ್ರಿಗೆ ಭಂಗವಾಗದಂತೆ ಜೆಡಿಎಸ್ ನೋಡಿಕೊಳ್ಳಬೇಕಿದೆ. ಕಳೆದ ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ವಿಧೇಯಕವನ್ನು ತನಗಿರುವ ಬಹುಮತದ ಬಲದಿಂದ ವಿಧಾನಸಭೆಯಲ್ಲಿ ಬಿಜೆಪಿ ಪಾಸ್ ಮಾಡಿಸಿಕೊಂಡಿತ್ತು. ಆದರೆ ವಿಧಾನ ಪರಿಷತ್‌ನಲ್ಲಿ ಬಿಜೆಪಿಗೆ ಬಹುಮತವಿಲ್ಲ. ಮೇಲ್ಮನೆಯಲ್ಲಿ ಈ ಹಿಂದೆ ಮಂಡನೆ ಸಾಧ್ಯವಾಗದ ಗೋಹತ್ಯೆ ನಿಷೇಧ ವಿಧೇಯಕವನ್ನು ಈ ಬಾರಿ ಮಂಡಿಸಿ ಒಪ್ಪಿಗೆ ಪಡೆಯಲೇಬೇಕೆಂದು ಬಿಜೆಪಿ ಪಣತೊಟ್ಟಿದೆ. ಸೋಮವಾರ ಕಲಾಪದ ವೇಳೆ ಜೆಡಿಎಸ್ ಸದಸ್ಯರು ಹೊರಗೆ ಉಳಿದು, ಮಹತ್ವದ ಮಸೂದೆಗೆ ಸದನದ ಒಪ್ಪಿಗೆ ಪಡೆಯುವ ತಂತ್ರಗಾರಿಕೆಯನ್ನು ಉಭಯ ಪಕ್ಷಗಳ ನಾಯಕರು ಹೆಣೆದಿದ್ದಾರೆ ಎಂದು ಹೇಳಲಾಗುತ್ತಿದೆ.

